ಗ್ರೂಪ್-ಬಿ:- ಗ್ರೂಪ್ - ಬಿ ವರ್ಗದ 62 ವೈದ್ಯರು ದರ್ಜೆ -3 (ಅ) ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಸರ್ಕಾರವು 133 ವೈದ್ಯರು ದರ್ಜೆ-3 ಹುದ್ದೆಗಳಿಗೆ ಆರ್ಥಿಕ ಮಿತವ್ಯಯವನ್ನು ಭರ್ತಿ ಮಾಡಲು ಪ್ರಸ್ತಾವನೆ ಕಳುಹಿಸಲಾಗಿದೆ. ಆ ಹುದ್ದೆಗಳು ಭರ್ತಿಯಾಗುವುದು ವಿಳಂಬವಾಗುವುದೆಂದು ಸರ್ಕಾರದ ಪತ್ರ ಸಂಖ್ಯೆ ಆಕುಕ: 475 : ಪಿಐಎಂ : 95: ದಿನಾಂಕ 7-6-96ರಲ್ಲಿ ಆಯಾ ಜಿಲ್ಲಾ ಅಧಿಕಾರಿಗಳಿಗೆ ಗ್ರಾಮೀಣ ವಿಭಾಗಗಳ ಔಷಧಾಲಯಗಳಲ್ಲಿನ ವೈದ್ಯರ ಖಾಲಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದವರೆಗೆ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಅಭ್ಯರ್ಥಿಯನ್ನು ಭರ್ತಿ ಮಾಡುವರೆಗೆ ನೇಮಿಸಿಕೊಳ್ಳಲು ಅನುಮತಿ ನೀಡಿದೆ.

ಗ್ರೂಪ್-ಸಿ:- ಗ್ರೂಪ್-ಸಿ ವರ್ಗದಲ್ಲಿ ಪ್ರಥಮ ದರ್ಜೆ ಸಹಾಯಕ ಮತ್ತು ದ್ವಿತೀಯ ದರ್ಜೆ ಸಹಾಯಕರನ್ನು ತಲಾ 5 ಹುದ್ದೆಗಳನ್ನು ಭರ್ತಿ ಮಾಡಲು ಲೋಕಸೇವಾ ಆಯೋಗವನ್ನು ಕೋರಲಾಗಿದೆ. ಶುಶ್ರೂಷಕಿಯರ 19 ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗ ಸಂದರ್ಶನ ನಡೆಸಿದ್ದು, ಆಯ್ಕೆಪಟ್ಟಿ ಬಂದ ನಂತರ ನೇಮಕ ಮಾಡಲಾಗುವುದು. ಸರ್ಕಾರ 100 ಔಷಧ ವಿತರಕರ ಹುದ್ದೆಗಳನ್ನು ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಗೆ ತರಬೇತಿ ನೀಡಲು ಅನುಮತಿ ಕೊಟ್ಟಿದೆ. ಶೀಘ್ರಲಿಪಿಗಾರರ ಒಂದು ಹುದ್ದೆ, ಬೆರಳಚ್ಚುಗಾರರ 9ಹುದ್ದೆಗಳನ್ನು ಆರ್ಥಿಕ ಮಿತವ್ಯಯ ಸಡಿಲಿಸಿ ಭರ್ತಿ ಮಾಡಲು ಅನುಮತಿ ಕೊಟ್ಟಿದ್ದು, ಶೀಘ್ರಲಿಪಿಗಾರರ ಮತ್ತು ಬೆರಳಚ್ಚುಗಾರರ ಆಯ್ಕೆಪ್ರಾಧಿಕಾರ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಹಂಚಿಕೆ ಮಾಡಲಿದೆ. ಇನ್ನುಳಿದ ಹುದ್ದೆಗಳಲ್ಲಿ (ದ್ವಿದಸ) ಕೆಲವನ್ನು ಪದೋನ್ನತಿಯಿಂದ ಭರ್ತಿ ಮಾಡಲಾಗುವುದು. ಶುಶ್ರೂಷಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಗೆ ತರಬೇತಿ ನೀಡಲು ಪ್ರಸ್ತಾವನೆ ಬಂದ ನಂತರ ಕ್ರಮ ಕೈಗೊಳ್ಳಲಾಗುವುದು.

ಗ್ರೂಪ್-ಡಿ:- ಗ್ರೂಪ್-ಡಿ ಹುದ್ದೆಗಳಲ್ಲಿ 62 ಹುದ್ದೆಗಳಿಗೆ ಈಗಾಗಲೇ ಮಿತವ್ಯಯವನ್ನು ಸಡಿಲಿಸಿ ಮಂಜೂರಾತಿಯನ್ನು ಸರ್ಕಾರ ನೀಡಿದೆ. ಇಲಾಖೆಯಲ್ಲಿ ಖಾಲಿ ಇರುವ ಬೆಂಗಳೂರು ವಿಭಾಗದ ಡಿ-ದರ್ಜೆ ಹುದ್ದೆಗಳನ್ನು ಭರ್ತಿ ಮಾಡಲು ಸಕ್ರಮಗೊಳಿಸಲಾಗಿರುವ ದಿನಗೂಲಿ ನೌಕರರ ಪಟ್ಟಿಯನ್ನು ಕಳುಹಿಸಿಕೊಡಲು ವಿಭಾಗಾಧಿಕಾರಿಗಳಿಗೆ ದಿನಾಂಕ 19-4-96ರಲ್ಲಿ ಪತ್ರ ಕಳುಹಿಸಲಾಗಿದೆ. ಉಳಿದ ಗ್ರೂಪ್-ಡಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಶಾಸಕರುಗಳಿಗೆ ಆಯುರ್ವೇದ ಔಷಧಿಯ ಸರಬರಾಜು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 474 (1108)

ಶ್ರೀ ಆರ್.ಸಭಾಪತಿ (ಉಡುಪಿ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶಾಸಕರುಗಳಿಗೆ ಆಯುರ್ವೇದ ಆಸ್ಪತ್ರೆಯಲ್ಲಿ ಬೇಕಾದ ಔಷಧ ಸಿಗದಿರುವುದು

(ಭಾರತೀಯವೈದ್ಯ ಪದ್ಧತಿ ಹಾಗೂ ಹೋಮಿಯೋಪತಿ) ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು? ವಿವರ ನೀಡುವುದು.

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಹೌದು.

ಆ) ಶಾಸಕರ ಭವನದಲ್ಲಿರುವ ಸರ್ಕಾರಿ ಆಯುರ್ವೇದ ಔಷಧಾಲಯಕ್ಕೆ ಪ್ರಸ್ತುತ ವಾರ್ಷಿಕ 25,000-00 ರೂಗಳ ಮೌಲ್ಯದ ಔಷಧಿಗಳನ್ನು ಒದಗಿಸಲಾಗುತ್ತಿದೆ. ಶಾಸಕರಿಗೆ ಅವಶ್ಯವಿರುವ ಔಷಧಿಗಳನ್ನು ಒದಗಿಸುವ ಸಲುವಾಗಿ ಈ ಮೊತ್ತವನ್ನು ರೂ.25,000-00 ಗಳಿಂದ 50,000-00ಗಳಿಗೆ ಹೆಚ್ಚಿಸಲು ನಿರ್ದೇಶಕರು, ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಇಲಾಖೆರವರಿಂದ ಪ್ರಸ್ತಾವನೆ ಬಂದಿದೆ. ಸರ್ಕಾರದ ಪರಿಶೀಲನೆಯಲ್ಲಿದೆ.

ವಿಷಯ:- ಉಡುಪಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡದ ದುರಸ್ತಿಗೆ ಹಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 475 (1110)

ಶ್ರೀ ಯು.ಆರ್.ಸಭಾಪತಿ (ಉಡುಪಿ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97ನೇ ಸಾಲಿನಲ್ಲಿ ಉಡುಪಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಹಾಗೂ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆಗಳ ಕಟ್ಟಡ ದುರಸ್ತಿಗೆ ಬಿಡುಗಡೆಯಾದ ಹಣವೆಷ್ಟು?

ಆ) ಈ ಹಣವನ್ನು ಯಾವಾಗ ಯಾವ ರೀತಿಯಲ್ಲಿ ಬಿಡುಗಡೆ ಮಾಡಲಾಗುವುದು.

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) 1996-97ನೇ ಸಾಲಿನಲ್ಲಿ ಯಾವುದೇ ಹಣವನ್ನು ಈವರೆಗೆ ಕಟ್ಟಡ ದುರಸ್ತಿಗೆ ಬಿಡುಗಡೆ ಮಾಡಿರುವುದಿಲ್ಲ.

ಆ) ಬಿಡುಗಡೆ ಮಾಡಿದಾಗ, ಇದರ ಬಗ್ಗೆ ಪರಿಶೀಲಿಸಲಾಗುವುದು.

ವಿಷಯ:- ರಾಜ್ಯದ ವಾರಪತ್ರವನ್ನು ಖಾಸಗಿಯವರಿಗೆ ನೀಡುವಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 476 (1107)

ಶ್ರೀ ಯು.ಆರ್.ಸಭಾಪತಿ (ಉಡುಪಿ):- ಮಾನ್ಯ ವಯಸ್ಕರ ಶಿಕ್ಷಣ ಮತ್ತು